**Vijaya Karnataka (Kannada Daily)**

Date: Saturday, August 10, 2013 Page No.4

Edition: Mysore Language: Kannada

# ಒತ್ತಡದಲ್ಲಿ ಜಾಗತಿಕ ಆರ್ಥಿಕತೆ: ಚಟರ್ಜಿ

**ವಿಕ ಸುದ್ದಿಲೋಕ,** ಮೈಸೂರು

ಪ್ರಸಕ್ತ ಆರ್ಥಿಕ ವರ್ಷದಲ್ಲಿ ಜಾಗತಿಕ ಮಾರುಕಟ್ಟೆ ಬೆಳವಣಿಗೆ ಕಡಿಮೆ ಇದ್ದು ಇದರಿಂದ ಜಾಗತಿಕ ಆರ್ಥಿಕತೆ ಒತ್ತಡಕ್ಕೆ ಸಿಲುಕಿದೆ ಎಂದು ಟಾಟಾ ಸ್ಟೀಲ್ ಕಂಪನಿಯ ಕಾರ್ಯನಿರ್ವಾಹಕ ನಿರ್ದೇಶಕ ಮತ್ತು ಸಿಎಫ್‌ಒ ಸಮೂಹದ ಕೌಶಿಕ್ ಚಟರ್ಜಿ ಆತಂಕ ವ್ಯಕ್ತಪಡಿಸಿದರು.

ನಗರದ ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಇನ್‌ಸ್ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್ ಡೆವಲಪ್‌ಮೆಂಟ್(ಎಸ್‌ಡಿಎಂಐಎಂಡಿ) ಸಂಸ್ಥೆಯಲ್ಲಿ 'ಹಣಕಾಸು ಮತ್ತು ಲೆಕ್ಕಪರಿಶೋಧನೆಯಲ್ಲಿ ಉದಯವಾಗುತ್ತಿರುವ ಪ್ರವೃತ್ತಿಗಳು' ವಿಷಯ ಕುರಿತು ಶುಕ್ರವಾರ ಆರಂಭಗೊಂಡ ಎರಡು ದಿನಗಳ ಅಂತಾರಾಷ್ಟ್ರೀಯ ಸಮ್ಮೇಳನದಲ್ಲಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ಪ್ರಸಕ್ತ ಸಾಲಿನಲ್ಲಿ ಜಾಗತಿಕ ಮಾರುಕಟ್ಟೆ ಕೇವಲ ಶೇ.2ರಷ್ಟು ಪ್ರಗತಿ ಸಾಧಿಸಿದೆ. ಕಳೆದ ಕೆಲವು ವರ್ಷಗಳನ್ನು ಗಮನಿಸಿದರೆ ಈ ಬೆಳವಣಿಗೆಯು ಅನಿಶ್ಚಿತ ಆರ್ಥಿಕತೆಯನ್ನು ಆಹ್ವಾನಿಸುತ್ತಿದೆ. ಆದ್ದರಿಂದ ಈ ವ್ಯವಸ್ಥೆಯನ್ನು ಮರು ವಿನ್ಯಾಸಗೊಳಿಸುವ ಮೂಲಕ ಸುಧಾರಣೆ ತರಬೇಕಿದೆ ಎಂದು ಅಭಿಪ್ರಾಯಪಟ್ಟರು. ಸುಸ್ಥಿರ ಆರ್ಥಿಕ ವ್ಯವಸ್ಥೆ ನಿರ್ಮಾಣಕ್ಕೆ ಉತ್ತರದಾಯಿತ್ವ, ಪಾರದರ್ಶಕತೆ, ವಿಶ್ವಾಸರ್ಹತೆಯಿಂದ ಕೂಡಿದ ಪ್ರಯತ್ನ ಅಗತ್ಯವಿದ್ದು, ಇವೆಲ್ಲವೂ ಇಂದು ಗೌಣವಾಗಿವೆ ಎಂದು ಅಭಿಪ್ರಾಯಪಟ್ಟರು.

ಯಾವುದೇ ದೇಶದಲ್ಲಿ ಆರ್ಥಿಕ ಬಿಕ್ಕಟ್ಟು ಸಂಭವಿಸಿದಾಗ ಅಲ್ಲಿನ ನೌಕರರಿಗೆ ಉದ್ಯೋಗ ಭದ್ರತೆಯ ಸಮಸ್ಯೆ ಎದುರಾಗುತ್ತದೆ. ಭಾರತದಲ್ಲಿ ಈ ರೀತಿಯ ಪರಿಸ್ಥಿತಿಗಳು ಹೆಚ್ಚಿದ್ದರೆ, ಪಾಶ್ಚಿಮಾತ್ಯ ದೇಶಗಳಲ್ಲಿ ಈ ಸಮಸ್ಯೆ ಕಡಿಮೆಯಿದೆ. ಆದರೂ ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಪಾಶ್ಚಿಮಾತ್ಯ ದೇಶಗಳಲ್ಲಿಯೂ ಇದೇ ಸನ್ನಿವೇಶ ನಿರ್ಮಾಣವಾಗಿದೆ ಎಂದರು. ಎಸ್‌ಡಿಎಂಐಎಂಡಿ ನಿರ್ದೇಶಕ ಎನ್.ಆರ್.ಪರಶುರಾಮ್, ಸಮ್ಮೇಳನ ಅಧ್ಯಕ್ಷ ಡಾ.ಉಲ್ಲಾಸ್ ರಾವ್ ಹಾಜರಿದ್ದರು.